98 ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೇಕೆರೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು?

ಆ) ಪದವಿ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಕಟ್ಟಡಗಳಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಕಟ್ಟಡದ ಕಾಮಗಾರಿಗಾಗಿ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಬಿಡುಗಡೆ ಮಾಡಲಾದ ಹಣವೆಷ್ಟು?

ಈ) ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕಾಲಮಿತಿಯನ್ನೇನಾದರೂ ನಿಗದಿಪಡಿಸಿದೆಯೇ?

ಶ್ರೀ ಕಾಗೇರಿ ವಿಶ್ವೇಶ್ವರ ಹೆಗಡೆ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) 1. ತುರುವೇಕೆರೆ ತಾಲ್ಲೂಕಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ – 4

2. ತುರುವೇಕೆರೆ ತಾಲ್ಲೂಕಿನ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ – 2

ಆ) ಹೌದು.

ಇ) **ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ :**

2008–09ರ ತನಕ ಒಟ್ಟು ರೂ.31.08 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. 2009–10ನೇ ಸಾಲಿನಲ್ಲಿ ಆರ್.ಐ.ಡಿ.ಎಫ್–13 ಮತ್ತು ಆರ್.ಐ.ಡಿ.ಎಫ್–14 ರ ಯೋಜನೆಗಳ ಅಡಿಯಲ್ಲಿ ಒಟ್ಟು ರೂ.71.18 ಲಕ್ಷಗಳ ವೆಚ್ಚದಲ್ಲಿ ಕೊಠಡಿಗಳ ನಿರ್ಮಾಣ ಯೋಜನೆಯನ್ನು ಹಮ್ಮಿಕೊಳ್ಳಲಾಗಿದ್ದು, ಲೋಕೋಪಯೋಗಿ ಇಲಾಖೆಗೆ ಕಾರ್ಯಾದೇಶವನ್ನು ನೀಡಲಾಗಿದೆ.

ಪ್ರಥಮ ದರ್ಜೆ ಕಾಲೇಜಿಗೆ ಸಂಬಂಧಿಸಿದಂತೆ

1. ತುರುವೇಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ 2006–07ನೇ ಸಾಲಿನಲ್ಲಿ ರೂ.100.00 ಲಕ್ಷಗಳ ಅಂದಾಜಿನ ಕಟ್ಟಡ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಲೋಕೋಪಯೋಗಿ ಇಲಾಖೆಗೆ ಕಾಮಗಾರಿಯನ್ನು ವಹಿಸಿ ಅಗತ್ಯ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಕಾಮಗಾರಿಯು ಪೂರ್ಣಗೊಳ್ಳುವ ಹಂತದಲ್ಲಿದೆ.

2. ದಂಡಿನಶಿವರ ಸರ್ಕಾರಿ ಪ್ರಥಮ ದರ್ಜೆ ಕಟ್ಟಡ ಕಾಮಗಾರಿಗೆ ನಬಾರ್ಡ್ ಆರ್.ಐ.ಡಿ.ಎಫ್–13ರ ಯೋಜನೆಯಡಿಯಲ್ಲಿ ರೂ.200.00 ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ.

ಈ) **ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ**

ಆರ್.ಐ.ಡಿ.ಎಫ್ ಯೋಜನೆಯಲ್ಲಿ ಕಾಮಗಾರಿಯನ್ನು ಪ್ರಾರಂಭಿಸಿದ ಮೂರು ವರ್ಷಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ.

ಪ್ರಥಮ ದರ್ಜೆ ಕಾಲೇಜಿಗೆ ಸಂಬಂಧಿಸಿದಂತೆ

ತುರುವೇಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಕಾಮಗಾರಿ ಪೂರ್ಣಗೊಳ್ಳುವ ಹಂತದಲ್ಲಿದ್ದು, ದಂಡಿನಶಿವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನಬಾರ್ಡ್ ಆರ್.ಐ.ಡಿ.ಎಫ್. –13ರ ಅಡಿಯಲ್ಲಿ ಮಂಜೂರಾತಿ ಆಗಿರುವ ಕಾರಣ ಸದರಿ ಕಾಲೇಜಿನ ಕಾಮಗಾರಿ ದಿ: 31–10–2010 ರೊಳಗೆ ಪೂರ್ಣಗೊಳಿಸಲು ಕಾಲಮಿತಿಯನ್ನು ನಿಗದಿಪಡಿಸಲಾಗಿದೆ.

989 ಶ್ರೀ ವೀರಭದ್ರಪ್ಪ ಹಾಲಹರವಿ (ಹುಬ್ಬಳ್ಳಿ–ಧಾರವಾಡ ಪೂರ್ವ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅನುದಾನರಹಿತ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು);

ಆ) ಪ್ರಾಥಮಿಕ, ಪ್ರೌಢ, ಪದವಿ ಪೂರ್ವ, ಡಿಎಡ್., ಬಿ.ಎಡ್. ಶಿಕ್ಷಣ ಸಂಸ್ಥೆಗಳ ಬಗ್ಗೆ ಜಿಲ್ಲಾವಾರು ಪೂರ್ಣ ವಿವರ ನೀಡುವುದು;

ಇ) ಅನುದಾನರಹಿತ ಶಾಲಾ:ಕಾಲೇಜುಗಳು ಆರ್ಥಿಕ ತೊಂದರೆಗಳು ಅನುಭವಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು)?

ಶ್ರೀ ಕಾಗೇರಿ ವಿಶ್ವೇಶ್ವರ ಹೆಗಡೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ರಾಜ್ಯದಲ್ಲಿ ಅನುದಾನರಹಿತ ಪ್ರಾಥಮಿಕ ಶಾಲೆಗಳು –8870, ಪ್ರೌಢ ಶಾಲೆಗಳು–4245, ಪದವಿ ಪೂರ್ವ ಕಾಲೇಜುಗಳು–1660 ಇರುತ್ತವೆ.

ರಾಜ್ಯದಲ್ಲಿ ಎನ್.ಸಿ.ಟಿ.ಇ ಮಾನ್ಯತೆ ಪಡೆದು ಅಸ್ತಿತ್ವದಲ್ಲಿರುವ ಅನುದಾನ ರಹಿತ ಡಿ.ಇಡಿ. ಕಾಲೇಜುಗಳ ಸಂಖ್ಯೆ 887 ಮತ್ತು ಬಿ.ಇಡಿ. ಕಾಲೇಜುಗಳು–380.